# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 415 (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವರ್ಗಾವಣೆಯಾಗಿರುವ ಪ್ರಶ್ನೆ)

ಉತ್ತರಿಸಬೇಕಾದ ದಿನಾಂಕ – 09.02.2018

ಸದಸ್ಯರ ಹೆಸರು – ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರವಾರ ಜಿಲ್ಲೆಯ ಕಾರವಾರ ಪಟ್ಟಣದಲ್ಲಿ ನಿರ್ಮಿತಿ ಕೇಂದ್ರದಿಂದ ಹಾಗೂ ಕೆ.ಆರ್.ಐ.ಡಿ.ಎಲ್. ನಿಂದ ಅನೇಕ ಕಾಮಗಾರಿಗಳು ನಡೆಯುತ್ತಿದ್ದು, ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಕಟ್ಟಡ ಕಾಮಗಾರಿ ಪೂರ್ಣಗೊಳಿಸದೇ ಇರುವುದರಿಂದ ಸಾರ್ವಜನಿಕರಿಗೆ ಹಾಗೂ ಅಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಉತ್ತರ ಕನ್ನಡ ಜಿಲ್ಲೆಯ ಕಾರವಾರ ಪಟ್ಟಣದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜಿಗೆ ಸಂಬಂಧಿಸಿದಂತೆ ಎರಡು ಕೊಠಡಿಗಳ ನಿರ್ಮಾಣದ ಕಾಮಗಾರಿಗಳನ್ನು ಉತ್ತರ ಕನ್ನಡ ಜಿಲ್ಲಾ ನಿರ್ಮಿತಿ ಕೇಂದ್ರಕ್ಕೆ ವಹಿಸಲಾಗಿರುತ್ತದೆ. ಕಾಮಗಾರಿಗಳ ಅಂದಾಜು ಮೊತ್ತ ರೂ. 36.00ಲಕ್ಷಗಳಾಗಿದ್ದು, ಅನುದಾನ ಬಿಡುಗಡೆಯಾಗಿರುತ್ತದೆ.<br><br>ಕಾಲೇಜಿನವರು ಸದರಿ ಕಾಮಗಾರಿಯನ್ನು 2016ನೇ ವರ್ಷದ ಕೊನೆಯಲ್ಲಿ ಪ್ರಾರಂಭಿಸಲು ಅನುಮತಿ ನೀಡಿದ್ದು, ಸೂಕ್ತ ಸ್ಥಳವನ್ನು ಒದಗಿಸದೇ ಹಾಗೂ ಜಿಲ್ಲೆಯಲ್ಲಿ ಮರಳು ಮತ್ತು ಜೆಲ್ಲಿಯ ಸಮಸ್ಯೆ ತಲೆದೋರಿದ್ದು, ಈ ಎಲ್ಲಾ ಕಾರಣಗಳಿಂದ ಕಾಮಗಾರಿಯು ನಿಗದಿತ ಸಮಯದೊಳಗಾಗಿ ಪೂರ್ಣಗೊಳ್ಳದೇ ಇದ್ದು, ಪ್ರಸ್ತುತ ಕಾಮಗಾರಿಯು ಮುಕ್ತಾಯ ಹಂತದಲ್ಲಿದ್ದು, ಮಾರ್ಚ್ 2018ರ ಅಂತ್ಯದೊಳಗಾಗಿ ಪೂರ್ಣಗೊಳ್ಳಲಿದೆ. |
| ಆ) | ಜಿಲ್ಲೆಯಲ್ಲಿ ಕಳೆದ 5 ವರ್ಷದಿಂದ ನಿರ್ಮಿತಿ ಹಾಗೂ ಕೆ.ಆರ್.ಐ.ಡಿ.ಎಲ್ ನಿಂದ ಯಾವ ಯಾವ ತಾಲ್ಲೂಕಿನಲ್ಲಿ ಯಾವ ಯಾವ ಯೋಜನೆಯಲ್ಲಿ, ಯಾವ ಯಾವ ಕಾಮಗಾರಿ ಮಂಜೂರಾಗಿರುತ್ತದೆ; ಹಾಗೂ ಅದಕ್ಕೆ ಬಂದಿರುವ ಅನುದಾನ ಮತ್ತು ಕಾಮಗಾರಿಯ ಇಂದಿನ ಸ್ಥಿತಿಯನ್ನು ಸವಿಸ್ತಾರ ಮಾಹಿತಿಯೊಂದಿಗೆ ವರದಿ ನೀಡುವುದು;(ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) | ಉತ್ತರ ಕನ್ನಡ ಜಿಲ್ಲಾ ನಿರ್ಮಿತಿ ಕೇಂದ್ರದಿಂದ ಕಳೆದ 05 ವರ್ಷಗಳಿಂದ (2012–13 ರಿಂದ 2016–17ರವರೆಗೆ) ಕೈಗೊಂಡಿರುವ ಕಾಮಗಾರಿಗಳ ವಿವರಗಳನ್ನು ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ **ಅನುಬಂಧ-1** ರಲ್ಲಿ ಒದಗಿಸಲಾಗಿದೆ.<br><br>ಸಾಲು / ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) / ಬಿಡುಗಡೆಯಾದ ಮೊತ್ತ (ರೂ. ಲಕ್ಷಗಳಲ್ಲಿ):<br>2012–13 / 1082.40 / 1007.15<br>2013–14 / 1806.05 / 1623.34<br>2014–15 / 1329.00 / 1209.88<br>2015–16 / 1856.78 / 1598.04<br>2016–17 / 2048.53 / 1223.03<br>ಒಟ್ಟು / **8122.76** / **6661.44**<br><br>ಈ ಮಾಹಿತಿಯನ್ನು ಸಿ.ಡಿ.ಯಲ್ಲಿ ದಾಖಲಿಸಿ ಇದರೊಂದಿಗೆ ಒದಗಿಸಲಾಗಿದೆ. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿತನದಿಂದ ಬಹಳಷ್ಟು ಕಾಮಗಾರಿಗಳು ನಿಧಾನಗತಿಯಲ್ಲಿ ಆಗುತ್ತಿರುವುದರಿಂದ ಸರ್ಕಾರದ ಅನುದಾನ ಸರಿಯಾದ ಸಮಯದಲ್ಲಿ ಉಪಯೋಗಿಸದೇ ಇರುವುದರಿಂದ ಅಂತಹವರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು). | ಉತ್ತರ ಕನ್ನಡ ಜಿಲ್ಲಾ ನಿರ್ಮಿತಿ ಕೇಂದ್ರದ ಯೋಜನಾ ಅಭಿಯಂತರರಾದ ಶ್ರೀ ಗಣೇಶ ದುಂಡಿಶೀಕರ್ ಎಂಬುವರು ತಮ್ಮ ವ್ಯಾಪ್ತಿಗೊಳಪಡುವ ಕಾಮಗಾರಿಗಳನ್ನು ನಿರ್ವಹಿಸುವಲ್ಲಿ ಬೇಜವಾಬ್ದಾರಿತನ ತೋರಿಸಿರುತ್ತಾರೆ. ಆದಕಾರಣ ಸದರಿ ನೌಕರರನ್ನು ಈಗಾಗಲೇ ಉತ್ತರ ಕನ್ನಡ ಜಿಲ್ಲಾ ನಿರ್ಮಿತಿ ಕೇಂದ್ರದಿಂದ ವಜಾಗೊಳಿಸಲಾಗಿರುತ್ತದೆ. |

ಸಂಖ್ಯೆ:ವಇ 26 ಹೆಚ್‌ಎಎಂ 2018

(ಯು.ಟಿ. ಅಬ್ದುಲ್ ಖಾದರ್)
ವಸತಿ ಸಚಿವರು.